ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ವಿಶ್ವೇಶ್ವರಯ್ಯ ತಾಂತ್ರಿಕ ಮಹಾ ವಿಶ್ವವಿದ್ಯಾಲಯದ ಕಟ್ಟಡದ ವಿಸ್ತೀರ್ಣದ ಬಗ್ಗೆ

ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

981 (1200) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಶ್ವೇಶ್ವರಯ್ಯ ತಾಂತ್ರಿಕ ಮಹಾ ವಿಶ್ವವಿದ್ಯಾಲಯ, ಚಿಕ್ಕಬಳ್ಳಾಪುರ ಕ್ಯಾಂಪಸ್‌ನಲ್ಲಿ ಕಟ್ಟಲಾಗಿರುವ ಕಟ್ಟಡಗಳ ವಿಸ್ತೀರ್ಣ ಎಷ್ಟು ; ಕಟ್ಟಡವಾರು (ಬ್ಲಾಕ್‌ವೈಸ್) ವಿವರ ನೀಡುವುದು ;

(ಆ) ಈ ಕಟ್ಟಡ ಕಟ್ಟಲು ವಿನಿಯೋಗಿಸಲಾಗಿರುವ ಹಣ ಪ್ರಮಾಣ ಎಷ್ಟು ;

(ಇ) ಯಾವ ಉದ್ದೇಶಕ್ಕಾಗಿ ಕಟ್ಟಡಗಳನ್ನು ಕಟ್ಟಲಾಗಿದೆ ;

(ಈ) ಅನೇಕ ಕಟ್ಟಡಗಳು ಪೂರ್ಣಗೊಳ್ಳದಿರುವುದು ಹಾಗೂ ಪೂರ್ಣಗೊಂಡಿರುವ ಕಟ್ಟಡವನ್ನು ಉಪಯೋಗಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಈ ಕ್ಯಾಂಪಸ್‌ನಲ್ಲಿ ನಡೆಸುತ್ತಿರುವ ಕೋರ್ಸ್‌ಗಳು ಯಾವುವು; ಎಷ್ಟು ವಿದ್ಯಾರ್ಥಿಗಳು ಇಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ ?